8	ವಿಜಾಪುರ	3
9	ಗದಗ	3
10	ಹಾವೇರಿ	1
11	ರಾಯಚೂರು	1
12	ಚಾಮರಾಜನಗರ	1
13	ಚಿಕ್ಕಮಗಳೂರು	4
14	ದಕ್ಷಿಣ ಕನ್ನಡ	1
15	ಹಾಸನ	4
16	ಕೊಡಗು	1
17	ಮಂಡ್ಯ	11
18	ಮೈಸೂರು	15
19	ಉಡುಪಿ	2
20	ಗುಲ್ಬರ್ಗ	2
21	ಕೊಪ್ಪಳ	2
22	ಬೀದರ್	1
	ಒಟ್ಟು	**100**

644 (525) **ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?**

ಅ) ಕಿತ್ತೂರು ಪಟ್ಟಣಕ್ಕೆ ಬಾಲಕಿಯರ ವಿದ್ಯಾರ್ಥಿನಿಲಯ ಮಂಜೂರಾತಿ ಕೋರಿ ಪ್ರಸ್ತಾವನೆ ಏನಾದರೂ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಹೌದು

ಆ) ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗಗಳ 52 ವಿದ್ಯಾರ್ಥಿನಿಲಯಗಳನ್ನು ಹಾಗೂ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ 50 ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದೆ ಇದರಲ್ಲಿ ಕಿತ್ತೂರು ಪಟ್ಟಣಕ್ಕೆ ಸಂಬಂಧಪಟ್ಟಂತೆ ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿರುವುದಿಲ್ಲ ಮುಂದಿನ ವರ್ಷದಲ್ಲಿ ಆಯವ್ಯಯದಲ್ಲಿ ಒದಗಿಸುವ ಅನುದಾನ ಅನುಸರಿಸಿ ರಾಜ್ಯದಲ್ಲಿನ ಇನ್ನಿತರ ಸ್ಥಳಗಳಲ್ಲಿನ ಬೇಡಿಕೆಗಳೊಂದಿಗೆ ಹೋಲಿಸಿ ಕಿತ್ತೂರು ಪಟ್ಟಣದಲ್ಲಿ ಹೊಸ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು

645 (526) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಮತಕ್ಷೇತ್ರದಲ್ಲಿರುವ ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? ಅವು ಯಾವುವು?

ಆ) ಈ ಕೇಂದ್ರಗಳಲ್ಲಿ ಇರಬೇಕಾದ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು?

ಇ) ಈಗ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಯ ಸಂಖ್ಯೆ ಎಷ್ಟು?

ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕಿತ್ತೂರು ಮತಕ್ಷೇತ್ರದಲ್ಲಿ 10 ಪ್ರಾ ಆ ಕೇಂದ್ರಗಳು ಹಾಗೂ ಒಂದು ಸಮುದಾಯ ಆರೋಗ್ಯ ಕೇಂದ್ರವಿದೆ

ಕ್ರ ಸಂ	ಸ ಆರೋಗ್ಯ ಕೇಂದ್ರ	ಕಿತ್ತೂರು
1	ಪ್ರಾಥಮಿಕ ಆರೋಗ್ಯ ಕೇಂದ್ರ	ಹುಣಸೀಕಟ್ಟಿ
2	ಪ್ರಾಥಮಿಕ ಆರೋಗ್ಯ ಕೇಂದ್ರ	ಇಟಗಿ
3	ಪ್ರಾಥಮಿಕ ಆರೋಗ್ಯ ಕೇಂದ್ರ	ಎಂ ಕೆ ಹುಬ್ಬಳ್ಳಿ
4	ಪ್ರಾಥಮಿಕ ಆರೋಗ್ಯ ಕೇಂದ್ರ	ನಾಗನೂರು